# ಕರ್ನಾಟಕ ಸರ್ಕಾರ

ಸಂ.ವಇ 59 ಹೆಚ್‌ಎಎಮ್ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 24ನೇ ಜೂನ್ 2009.

## ಸು ತ್ತೋ ಲೆ

ವಿಷಯ: ಲೈಂಗಿಕ ವೃತ್ತಿಪರ ಮಹಿಳೆಯರಿಗೆ ವಿಶೇಷ ವರ್ಗದ ಯೋಜನೆಯಡಿ ವಸತಿ ಸೌಕರ್ಯ ಕಲ್ಪಿಸುವ ಬಗ್ಗೆ.

---

ಕರ್ನಾಟಕ ಸರ್ಕಾರವು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜನಾಂಗದವರಿಗೆ ಹಾಗೂ ಬಡತನ ರೇಖೆಗಿಂತ ಕೆಳಗಿನವರಿಗೆ ವಿವಿಧ ಯೋಜನೆಗಳಡಿಯಲ್ಲಿ ವಸತಿ ಸೌಕರ್ಯವನ್ನು ಕಲ್ಪಿಸುತ್ತಿದೆ. ಸಮಾಜದಲ್ಲಿನ ಅಂಗವಿಕಲರು, ಕುಷ್ಠರೋಗದಿಂದ ಗುಣಮುಖರಾದವರು, ಮಾಜಿ ಸೈನಿಕರು, ಹೆಚ್‌ಐವಿ ಸೋಂಕಿಗೆ ಒಳಗಾದವರು, ದೇವದಾಸಿಯರು ಮತ್ತು ದೌರ್ಜನ್ಯಕ್ಕೆ ಒಳಗಾದ ಮಹಿಳೆಯರು ಮತ್ತಿತರರನ್ನು ವಿಶೇಷ ವರ್ಗದ ಫಲಾನುಭವಿಗಳನ್ನಾಗಿ ಪರಿಗಣಿಸಿ ವಸತಿ ಸೌಕರ್ಯ ಕಲ್ಪಿಸಿಕೊಡುತ್ತಿದೆ. ಇದೇ ರೀತಿ, ಸಮಾಜದಲ್ಲಿ ವಿವಿಧ ಕಾರಣಗಳಿಂದಾಗಿ ಲೈಂಗಿಕ ವೃತ್ತಿಯಲ್ಲಿ ತೊಡಗಿ ಸಾಮಾಜಿಕ ಮತ್ತು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಮಹಿಳೆಯರಿಗೂ ವಸತಿ ಸೌಕರ್ಯ ಕಲ್ಪಿಸಲು, ಸರ್ಕಾರವು ಈ ಕೆಳಗಿನ ಮಾರ್ಗ ಸೂಚಿಗಳನ್ನು ನಿಗದಿಪಡಿಸುತ್ತದೆ:

1. ಖಾಲಿ ನಿವೇಶನ ಹೊಂದಿರುವ ಲೈಂಗಿಕ ವೃತ್ತಿಪರ ಮಹಿಳೆಯರು, ಆಶ್ರಯ ಯೋಜನೆಯಡಿ ನಿಗದಿಪಡಿಸಿರುವ ನಿಯಮಗಳಡಿ ಆಯ್ಕೆಯಾಗಲು ಅರ್ಹರಿದ್ದಲ್ಲಿ, ಇಂಥ ಮಹಿಳೆಯರನ್ನು, ಈಗಾಗಲೇ ಹೊರಡಿಸಲಾಗಿರುವ ಸರ್ಕಾರದ ಸುತ್ತೋಲೆ ಸಂ. ವಇ 85 ಹೆಚ್‌ಎಎಮ್ 2007 ದಿನಾಂಕ 12.03.2007ರ ಕ್ರಮ ಸಂ. (7)ರಲ್ಲಿ ತಿಳಿಸಿರುವ "ದೌರ್ಜನ್ಯಕ್ಕೊಳಗಾದ ಮಹಿಳೆಯರು" ಎಂಬ ವರ್ಗದಡಿ ಆಯ್ಕೆ ಮಾಡಬಹುದು.

2. ಈ ಮಹಿಳೆಯರನ್ನು ದೌರ್ಜನ್ಯಕ್ಕೊಳಗಾದ ಮಹಿಳೆಯರೆಂದು ಗುರ್ತಿಸಿ, ಅಂಥವರ ಪಟ್ಟಿಯನ್ನು ಸಮಾಜ ಕಲ್ಯಾಣ ಇಲಾಖೆ/ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ಕಾಣಿಸಿದ ಸುತ್ತೋಲೆಯಲ್ಲಿ ರಚಿಸಲ್ಪಟ್ಟ ಜಿಲ್ಲಾಧಿಕಾರಿಗಳ ಮಟ್ಟದ ವಿಶೇಷ ಸಮಿತಿಯ ಸಭೆಯಲ್ಲಿಟ್ಟು ಅನುಮೋದನೆ ಪಡೆದುಕೊಂಡು, ಮನೆ ನಿರ್ಮಾಣ ಕೈಗೊಳ್ಳಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮಕ್ಕೆ ಸಲ್ಲಿಸತಕ್ಕದ್ದು.

K. R. Vallur 24/06

(ಕೆ. ಆರ್. ವಲ್ಲೂರ)
ಶೀಠಾಧಿಕಾರಿ-2, ವಸತಿ ಇಲಾಖೆ.

1. ಸರ್ಕಾರದ ಕಾರ್ಯದರ್ಶಿ, ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಎಲ್ಲಾ ಜಿಲ್ಲಾಧಿಕಾರಿಗಳು
4. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
5. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ, ಕಾವೇರಿ ಭವನ, ಬೆಂಗಳೂರು-9.
6. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಬೆಂಗಳೂರು-9.
7. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಏಡ್ಸ್ ನಿರೋಧಕ ಸಂಸ್ಥೆ, ಕ್ರಿಸೆಂಟ್ ರಸ್ತೆ, ಬೆಂಗಳೂರು- 1.

ರಾ.ಗಾಂ.ಗ್ರಾ.ವ.ನಿ.ನಿ.
ಬೆಂಗಳೂರು,
25 JUN 2009

4